ಇ-ಆಡಳಿತ ಕೇಂದ್ರ
(ಇ-ಆಡಳಿತ ಇಲಾಖೆ, ಸಿಆಸುಇ (ಆಸು) ಇದರ ಅಧೀನದಲ್ಲಿ, ಕರ್ನಾಟಕ ರಾಜ್ಯ ಸರ್ಕಾರ ಸ್ಥಾಪಿಸಿರುವ ಮತ್ತು ಕರ್ನಾಟಕ ಸಂಘ ಸಂಸ್ಥೆಗಳ ನೊಂದಾಯಿತ ಅಧಿನಿಯಮ 1960ರ ಅನ್ವಯ ನೋಂದಣಿಯಾಗಿರುವ ಒಂದು ಸಂಸ್ಥೆ)
ನಂ.39, ಶಾಂತಿ ಗೃಹ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು – 560001
ದೂರವಾಣಿ ಸಂಖ್ಯೆ : 080-22239393/22236393; ಮಿಂಚಂಚೆ ವಿಳಾಸ: pdcb@karnataka.gov.in

ಸಂಖ್ಯೆ: CEG-11012/5/2019-PD(CB)-CeG (E: 380135) ದಿನಾಂಕ: 24-12-2024

ಇವರಿಗೆ,
ಮಾನ್ಯ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
ಕರ್ನಾಟಕ ಸರ್ಕಾರ, ವಿಧಾನಸೌಧ,
ಬೆಂಗಳೂರು-01

ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

ಮಾನ್ಯರೆ,

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯ ಅವಧಿಯನ್ನು ದಿನಾಂಕ: 31-12-2025ರ ವರೆಗೆ ವಿಸ್ತರಿಸುವ ಕುರಿತು.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ಸೇವನೆ 2023 ದಿನಾಂಕ: 11-03-2024.
ಸುತ್ತೋಲೆ ಸಂಖ್ಯೆ: ಸಿ.ಆ.ಸು.ಇ. 29 ಸೇವನೆ 2020 ದಿನಾಂಕ: 03-04-2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರುಗಳು ಹಾಗೂ ನಿಗಮ-ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸಹ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಉಲ್ಲೇಖಿತ (1)ರ ಅನ್ವಯ ಸರ್ಕಾರವು ದಿನಾಂಕ: 31-12-2024 ರವರೆಗೆ ಸಮಯಾವಕಾಶ ವಿಸ್ತರಿಸಿ ಅಧಿಸೂಚನೆ ಹೊರಡಿಸಿರುತ್ತದೆ. ಉಲ್ಲೇಖ (2)ರ ಅನ್ವಯ, ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿದ್ದು, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದೆ ಇರುವ/ ಪರೀಕ್ಷೆ ತೆಗೆದುಕೊಳ್ಳದ ಇರುವ ಸರ್ಕಾರಿ ನೌಕರರು ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗಲು ಸೂಚಿಸಲಾಗಿರುತ್ತದೆ.

ಆದರೆ, 2024ರ ಜನವರಿಯಿಂದ ಈವರೆಗೆ ಕಿಯೋನಿಕ್ಸ್ ಸಂಸ್ಥೆಯಿಂದ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಡೆಸಲು ಸಾಧ್ಯವಾಗದೇ ಇದ್ದ ಕಾರಣ, ಇನ್ನೂ ಸುಮಾರು 1.40 ಲಕ್ಷಕ್ಕೂ ಹೆಚ್ಚು ಸರ್ಕಾರಿ ಅಧಿಕಾರಿಗಳು ಮತ್ತು ನೌಕರರುಗಳು ಹಾಗೂ ನಿಗಮ-ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸಹ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಬೇಕಾಗಿರುತ್ತದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ-ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ದಿನಾಂಕ: 31-12-2025ರವರೆಗೆ ಅವಧಿಯನ್ನು ವಿಸ್ತರಿಸಿ ಆದೇಶ ಹೊರಡಿಸಲು ತಮ್ಮಲ್ಲಿ ಕೋರಿದೆ.

ವಂದನೆಗಳೊಂದಿಗೆ,

ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
ಇ-ಆಡಳಿತ ಕೇಂದ್ರ

ಪ್ರತಿಯನ್ನು,

1) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು-01
2) ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು-01
3) ವ್ಯವಸ್ಥಾಪಕ ನಿರ್ದೇಶಕರು, ಕಿಯೋನಿಕ್ಸ್, ಟಿಟಿಎಂಸಿ ಕಟ್ಟಡ, ಶಾಂತಿನಗರ, ಬೆಂಗಳೂರು-27